# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 67+90 |
| ಸದಸ್ಯರ ಹೆಸರು | : | ಶ್ರೀ ಎಂ.ನಾಗರಾಜು ಹಾಗೂ<br>ಶ್ರೀ ಕೇಶವ ಪ್ರಸಾದ್.ಎಸ್<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 04-12-2023 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಸಚಿವರು |

***

| | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಜನತೆಗೆ ಇಂಧನ ಇಲಾಖೆ ವತಿಯಿಂದ "ಗೃಹಜ್ಯೋತಿ" ಯೋಜನೆಯಡಿಯಲ್ಲಿ 200 ಯೂನಿಟ್ ವಿದ್ಯುತ್ ಉಚಿತವಾಗಿ ಪೂರೈಸುವ ಕಾರ್ಯಕ್ರಮ ಬಗ್ಗೆ ವಿವರವಾದ ಮಾಹಿತಿಯನ್ನು ನೀಡುವುದು. | ರಾಜ್ಯದ ಜನತೆಗೆ ಇಂಧನ ಇಲಾಖೆ ವತಿಯಿಂದ "ಗೃಹ ಜ್ಯೋತಿ" ಯೋಜನೆಯಡಿಯಲ್ಲಿ 200 ಯೂನಿಟ್ ವಿದ್ಯುತ್ ಉಚಿತವಾಗಿ ಪೂರೈಸುವ ಕಾರ್ಯಕ್ರಮವನ್ನು ಸರ್ಕಾರದ ಆದೇಶ ಸಂಖ್ಯೆ: ಎನರ್ಜಿ/164/ಪಿಎಸ್ಆರ್/2023 ದಿನಾಂಕ: 05.06.2023 ರನ್ವಯ ಜುಲೈ 2023 ರ ತಿಂಗಳ ವಿದ್ಯುತ್ ಬಳಕೆಗೆ ಆಗಸ್ಟ್ 2023 ರ ತಿಂಗಳಿಂದ ನೀಡುವ ಬಿಲ್ಲಿಗೆ ಅನ್ವಯವಾಗುವಂತೆ ಜಾರಿಗೆ ತರಲು ಆದೇಶಿಸಲಾಗಿದೆ.<br>ಮುಂದುವರೆದು, ಆದೇಶದಲ್ಲಿ "ಗೃಹ ಜ್ಯೋತಿ" ಯೋಜನೆಯಡಿ ರಾಜ್ಯದಲ್ಲಿನ ಪ್ರತಿ ಮನೆಗೆ ಪ್ರತಿ ತಿಂಗಳಿಗೆ ಗರಿಷ್ಠ 200 ಯೂನಿಟ್‌ಗಳವರೆಗಿನ ಬಳಕೆಯ ಮಿತಿಯಲ್ಲಿ ಪ್ರತಿ ಗ್ರಾಹಕರ ಮಾಸಿಕ ಸರಾಸರಿ ಬಳಕೆಯ (ಆರ್ಥಿಕ ವರ್ಷ 2022-23 ರ ಬಳಕೆಯ ಆಧಾರದನ್ವಯ) ಯೂನಿಟ್‌ಗಳ ಮೇಲೆ ಶೇ.10 ರಷ್ಟು ಹೆಚ್ಚಿನ ಬಳಕೆಯ ಮಿತಿಯನ್ನು ಅನುಮತಿಸಿ, ಅದಕ್ಕನುಗುಣವಾಗಿ ವಿದ್ಯುತ್ ಬಿಲ್ಲಿನ ಮೊತ್ತವನ್ನು ಉಚಿತವಾಗಿ ಒದಗಿಸಲು ಹಾಗೂ 200 ಯೂನಿಟ್‌ಗಳ ಬಳಕೆಯನ್ನು ಮೀರಿದ ಗ್ರಾಹಕರು ಪೂರ್ಣ ವಿದ್ಯುತ್ ಬಿಲ್ಲನ್ನು ಪಾವತಿಸಲು ಸರ್ಕಾರವು ಆಡಳಿತಾತ್ಮಕ ಅನುಮೋದನೆ ನೀಡಿದೆ.<br>ಈ ಯೋಜನೆಯನ್ನು ಜುಲೈ 2023ರ ತಿಂಗಳ ವಿದ್ಯುತ್ ಬಳಕೆಗೆ ಅನ್ವಯವಾಗುವಂತೆ ಈ ಕೆಳಕಂಡ ಷರತ್ತುಗಳೊಂದಿಗೆ ಜಾರಿಗೆ ತರಲು ಆದೇಶಿಸಿದೆ.<br><br>1) ಈ ಯೋಜನೆಯು ಗೃಹ ಬಳಕೆಯ ವಿದ್ಯುತ್ ಸಂಪರ್ಕಗಳಿಗೆ ಮಾತ್ರ ಅನ್ವಯವಾಗುತ್ತದೆ; ವಾಣಿಜ್ಯ ಉದ್ದೇಶಗಳಿಗೆ ವಿದ್ಯುತ್ ಉಪಯೋಗಿಸಿದಲ್ಲಿ ಅನ್ವಯವಾಗುವುದಿಲ್ಲ.<br>2) ಪ್ರತಿ ತಿಂಗಳ ಮೀಟರ್ ರೀಡಿಂಗ್ ಮಾಡಿದಾಗ, ಒಟ್ಟು ವಿದ್ಯುತ್ ಬಳಕೆಯ ಪ್ರಮಾಣಕ್ಕೆ ಬಿಲ್ಲನ್ನು ನಮೂದಿಸುವುದು.<br>3) ಗೃಹ ವಿದ್ಯುತ್ ಬಳಕೆದಾರನ ಅರ್ಹ ಮೊತ್ತವನ್ನು ಬಿಲ್‌ನಲ್ಲಿ ಕಡಿತಗೊಳಿಸಿ, ಉಳಿದ ಮೊತ್ತವನ್ನು ಗ್ರಾಹಕರಿಗೆ net bill ನೀಡುವುದು ಹಾಗೂ ಗ್ರಾಹಕರು net bill ನ್ನು ಪಾವತಿಸುವುದು.<br>4) ಅರ್ಹ ಯೂನಿಟ್ / ಮೊತ್ತಕ್ಕಿಂತ ಒಳಗೆ ಬಿಲ್ ಆಗಿದ್ದಲ್ಲಿ ಅಂತಹ ಗ್ರಾಹಕರಿಗೆ ಶೂನ್ಯ ಬಿಲ್ಲನ್ನು ನೀಡಲಾಗುವುದು.<br>5) ಈ ಯೋಜನೆಯಡಿ ಸೌಲಭ್ಯ ಪಡೆಯಲು ಇಚ್ಛಿಸುವ ಗ್ರಾಹಕರು ಸೇವಾ ಸಿಂಧು ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸುವುದು.<br>6) ಪ್ರತಿ ಫಲಾನುಭವಿಯು ತನ್ನ Customer ID / Account ID ಇವುಗಳನ್ನು ಆಧಾರ್‌ಗೆ ಕಡ್ಡಾಯವಾಗಿ ಜೋಡಣೆ ಮಾಡುವುದು. |

| | | |
|---|---|---|
| | | 7) ಪ್ರಸ್ತುತ ಚಾಲ್ತಿಯಲ್ಲಿರುವ ಭಾಗ್ಯ ಜ್ಯೋತಿ / ಕುಟೀರ ಜ್ಯೋತಿ ಯೋಜನೆ ಮತ್ತು ಅಮೃತ ಜ್ಯೋತಿ ಯೋಜನೆಯ ಫಲಾನುಭವಿ ಗ್ರಾಹಕರುಗಳನ್ನು ಗೃಹ ಜ್ಯೋತಿ ಯೋಜನೆಯಡಿಯಲ್ಲಿ ಸೇರ್ಪಡಿಸುವುದು.<br>8) ದಿನಾಂಕ 30.06.2023ರ ಅಂತ್ಯಕ್ಕೆ (ಜೂನ್ 2023 ರ ಮಾಹೆಯಲ್ಲಿ ಬಳಸಿದ ವಿದ್ಯುತ್ ಪ್ರಮಾಣಕ್ಕೆ ಜುಲೈ 2023ರಲ್ಲಿ ವಿತರಿಸಿದ ಬಿಲ್ಲಿನ ಮೊತ್ತ ಒಳಗೊಂಡಂತೆ) ಬಾಕಿ ಇರುವ ವಿದ್ಯುತ್ ಶುಲ್ಕದ ಬಾಕಿ ಮೊತ್ತವನ್ನು 3 ತಿಂಗಳೊಳಗೆ ಪಾವತಿಸತಕ್ಕದ್ದು. ಬಾಕಿ ಮೊತ್ತವನ್ನು ನಿಗಧಿತ ಅವಧಿಯೊಳಗೆ ಪಾವತಿಸದಿದ್ದಲ್ಲಿ ಅಂತಹ ಗ್ರಾಹಕರ ವಿದ್ಯುತ್ ಸ್ಥಾವರಗಳ ಸಂಪರ್ಕವನ್ನು ಕಡಿತಗೊಳಿಸಲಾಗುವುದು.<br>9) ಗೃಹ ವಿದ್ಯುತ್ ಗ್ರಾಹಕರ ಸ್ಥಾವರಗಳಿಗೆ ಮಾಪಕವನ್ನು ಅಳವಡಿಸುವುದು ಹಾಗೂ ಮಾಪಕ ಓದುವುದು ಕಡ್ಡಾಯವಾಗಿರುತ್ತದೆ.<br>10) ಗೃಹ ವಿದ್ಯುತ್ ಬಳಕೆದಾರರ ಹೆಸರಿನಲ್ಲಿ ಒಂದಕ್ಕಿಂತ ಹೆಚ್ಚು ಸ್ಥಾವರಗಳಿದ್ದಲ್ಲಿ, ಒಂದು ಸ್ಥಾವರಕ್ಕೆ ಮಾತ್ರ ಈ ಯೋಜನೆಯಡಿಯ ಸೌಲಭ್ಯಕ್ಕೆ ಅರ್ಹರಾಗುವರು. |
| ಆ | ರಾಜ್ಯದ ಜನತೆಗೆ 200 ಯೂನಿಟ್ ವಿದ್ಯುತ್ ಉಚಿತವಾಗಿ ನೀಡುವುದರಿಂದ ಉಂಟಾಗುವ ಉಪಯೋಗಗಳು ಮತ್ತು ತೊಂದರೆಗಳ ಮಾಹಿತಿಯನ್ನು ನೀಡುವುದು: ಈ ಯೋಜನೆಗಾಗಿ ಸರ್ಕಾರದ ಬೊಕ್ಕಸಕ್ಕೆ ಉಂಟಾಗಬಹುದಾದ ಹೊರೆಯೆಷ್ಟು ಮತ್ತು ಈ ಹೊರೆಯನ್ನು ಸರಿದೂಗಿಸಿ ವಿದ್ಯುತ್ ಕಂಪನಿಗಳಿಗೆ ನಷ್ಟವುಂಟಾಗದಂತೆ ಮಾಡಲು ಸರ್ಕಾರ ಕೈಗೊಳ್ಳಲು ಉದ್ದೇಶಿಸಿರುವ ಮಾರ್ಗಗಳೇನು; | ಮೂಲಭೂತ ಸೌಕರ್ಯಗಳಲ್ಲಿ ಒಂದಾದ ವಿದ್ಯುಚ್ಛಕ್ತಿಯನ್ನು ಉಚಿತವಾಗಿ ರಾಜ್ಯದ ಗೃಹ ಬಳಕೆದಾರರಿಗೆ ಒದಗಿಸುವುದಾಗಿರುತ್ತದೆ. ಇದರಿಂದಾಗಿ ಗೃಹ ಬಳಕೆದಾರರಿಗೆ ಅನುಕೂಲವಾಗುತ್ತದೆ.<br><br>ದೈನಂದಿನ ಜೀವನದಲ್ಲಿ ಬಳಕೆಯಾಗುವ ವಸ್ತುಗಳ ಬೆಲೆ ಏರಿಕೆಯಿಂದ ಜನ ತತ್ತರಿಸಿಹೋಗಿದ್ದು, ಗೃಹಜ್ಯೋತಿ ಯೋಜನೆಯಡಿ ಉಚಿತ ವಿದ್ಯುತ್ ನೀಡುವುದರಿಂದ, ಉಳಿತಾಯವಾಗುವ ಹಣದಿಂದ ಸಾಮಾನ್ಯ ಜನರ ಖರೀದಿ ಶಕ್ತಿ ಇದರ ಜೊತೆಗೆ ನಾಗರಿಕರಲ್ಲಿ ಹಣ ಉಳಿತಾಯವಾಗುವುದರಿಂದ, ಇವರ Purchasing Power ಹೆಚ್ಚಾಗುತ್ತದೆ. ಇದರಿಂದ, ಉತ್ಪಾದನಾ ವಲಯಕ್ಕೆ ಹೆಚ್ಚು ಪ್ರೋತ್ಸಾಹಧನ ನೀಡಿದಂತಾಗುತ್ತದೆ. ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ಉದ್ಯೋಗ ಸೃಷ್ಟಿಸಲು ಸಹಕಾರಿಯಾಗುತ್ತದೆ. ಆರ್ಥಿಕ ಚಟುವಟಿಕೆಗಳು ವೃದ್ಧಿಯಾಗುತ್ತದೆ ಮತ್ತು ಉದ್ಯೋಗ ಸೃಷ್ಟಿಸಲು ಸಾಧ್ಯವಾಗುತ್ತದೆ ಹಾಗೂ ರಾಜ್ಯದ ಆರ್ಥಿಕ ಪರಿಸ್ಥಿತಿ ಸದೃಢವಾಗುತ್ತದೆ.<br><br>ಈ ಯೋಜನೆಯ ಅನುಷ್ಠಾನಕ್ಕಾಗಿ ಸರ್ಕಾರವು 2023-24 ನೇ ಸಾಲಿಗೆ ಅಂದಾಜು ರೂ.13,910 ಕೋಟಿಗಳ ಸಹಾಯಧನದ ಅವಶ್ಯಕತೆ ಇರುವುದಾಗಿ ಅಂದಾಜಿಸಿದ್ದು, ಜುಲೈ-2023 ರ ಆಯವ್ಯಯದಲ್ಲಿ ರೂ.9,000 ಕೋಟಿಗಳನ್ನು ಹಂಚಿಕೆ ಮಾಡಿ ಒದಗಿಸಿದ್ದು, ಈ ಮೊತ್ತವು ಸರ್ಕಾರದ ಬೊಕ್ಕಸಕ್ಕೆ ಹೆಚ್ಚಿನ ಹೊರೆಯಾದರೂ ಸಹ ಸರ್ಕಾರವು ಈ ಮೊತ್ತವನ್ನು ಸಹಾಯಧನದ ರೂಪದಲ್ಲಿ ವಿದ್ಯುತ್ ಸರಬರಾಜು ಕಂಪನಿಗಳಿಗೆ ಒದಗಿಸುತ್ತದೆ. |

| | | |
|---|---|---|
| (ಇ) | ರಾಜ್ಯದ ಒಟ್ಟು ಎಷ್ಟು ಗ್ರಾಹಕರು ಉಚಿತ 200 ಯೂನಿಟ್ ವಿದ್ಯುತ್ ಸೌಲಭ್ಯ ಪಡೆಯುತ್ತಿದ್ದಾರೆ; ಮತ್ತು ಎಷ್ಟು ಗ್ರಾಹಕರು ಉಚಿತ ವಿದ್ಯುತ್ ಸೌಲಭ್ಯ ಪಡೆಯಲು ವಿಫಲರಾಗಿರುತ್ತಾರೆ ಮತ್ತು ಯಾವ ಕಾರಣಕ್ಕಾಗಿ ಈ ಯೋಜನೆಯನ್ನು ಪಡೆಯಲು ವಿಫಲರಾಗಿರುತ್ತಾರೆ? (ವಿವರ ನೀಡುವುದು) | ಪ್ರಸ್ತುತ ದಿನಾಂಕ: 18.11.2023 ರ ಅಂತ್ಯಕ್ಕೆ ಒಟ್ಟು 1.63 ಕೋಟಿ ಗ್ರಾಹಕರು ನೊಂದಣಿಯಾಗಿದ್ದು, ಅದರಲ್ಲಿ 1.50 ಕೋಟಿ ಗ್ರಾಹಕರು ಈ ಯೋಜನೆಯ ಸೌಲಭ್ಯ ಪಡೆಯುತ್ತಿದ್ದಾರೆ.<br><br>ಈ ಯೋಜನೆಯ ಸೌಲಭ್ಯಕ್ಕಾಗಿ ನೊಂದಾಯಿಸಿರುವ ಗ್ರಾಹಕರಲ್ಲಿ ಈ ಕೆಳಕಂಡ ಕಾರಣಗಳಿಂದಾಗಿ ಈ ಯೋಜನೆಯ ಸೌಲಭ್ಯಕ್ಕೆ ಅರ್ಹರಾಗುತ್ತಿಲ್ಲ.<br><br>1. 2023-24ನೇ ಸಾಲಿನ ವರ್ಷದ ಮಾಹೆಗಳಲ್ಲಿ ಮಾಸಿಕ 200 ಯೂನಿಟ್ ಬಳಕೆ ಮೀರಿದಲ್ಲಿ,<br>2. 2022-23ನೇ ಸಾಲಿನ ಮಾಸಿಕ ಸರಾಸರಿ ಬಳಕೆಯು 200 ಯೂನಿಟ್‌ಗಳಿಗಿಂತ ಮೀರಿದಲ್ಲಿ,<br>3. ಪ್ರತಿ ಮಾಸಿಕ ಬಿಲ್ಲಿಂಗ್ ದಿನಾಂಕದ ನಂತರ (Cut-off date 27th) ನೊಂದಣಿಯಾದವರು ಮುಂದಿನ ಮಾಹೆಯಲ್ಲಿ 200 ಯೂನಿಟ್ ಬಳಕೆಯ ಮಿತಿಯಲ್ಲಿದ್ದಲ್ಲಿ ಅರ್ಹರಾಗಿರುತ್ತಾರೆ.<br>4. SRTPV ಅಳವಡಿಸಿಕೊಂಡಿರುವ ಗ್ರಾಹಕರು ಈ ಯೋಜನೆಯ ಸೌಲಭ್ಯಕ್ಕೆ ಪ್ರಸ್ತುತ ಆದೇಶದನ್ವಯ ಅರ್ಹರಾಗಿರುವುದಿಲ್ಲ. |

ಸಂಖ್ಯೆ: ಎನರ್ಜಿ 271 ಇಬಿಎಸ್ 2023

**(ಕೆ.ಜೆ.ಜಾರ್ಜ್)**
**ಇಂಧನ ಸಚಿವರು**